ಕರ್ನಾಟಕ ಸರ್ಕಾರ.

(ಕಂದಾಯ ಇಲಾಖೆ)

ಜಿಲ್ಲಾಧಿಕಾರಿಗಳು ಹಾಗೂ
ಜಿಲ್ಲಾ ದಂಡಾಧಿಕಾರಿಗಳ ಕಾರ್ಯಾಲಯ,
ಹಾಸನ ಜಿಲ್ಲೆ,
ಹಾಸನ – 573 201
website:www.hassan.nic.in

ಕಛೇರಿ : 08172 – 267345,
265028, 253345
ನಿವಾಸ : 08172 – 268202
ಫ್ಯಾಕ್ಸ್ : 08172 – 265418
E-mail:deo.hassan@gmail.com

ಸಂಖ್ಯೆ: ಗ್ರಾ.ಲೆ.ಸಿಬ್ಬಂದಿ–83/2016–2017.

ದಿನಾಂಕ: 21–06–2017

## :: ಅಧಿಸೂಚನೆ ::

**ವಿಷಯ:–** ಹಾಸನ ಜಿಲ್ಲೆ–ಗ್ರಾಮಲೆಕ್ಕಿಗರ ನೇರ ನೇಮಕಾತಿ 2016– ಅಂತಿಮ ಆಯ್ಕೆ ಪಟ್ಟಿ ಪ್ರಕಟಿಸುವ ಬಗ್ಗೆ.

**ಉಲ್ಲೇಖ:–**
1. ಸರ್ಕಾರಿ ಆದೇಶ ಸಂಖ್ಯೆ: ಸಿಆಸುಇ 08 ಸೆಹಿಮ 95, ದಿನಾಂಕ: 20–6–1995.
2. ಸರ್ಕಾರಿ ಆದೇಶ ಸಂಖ್ಯೆ : ಸಿಆಸುಇ 53 ಸೆನೆನಿ 2007, ದಿನಾಂಕ: 04–01–2008.
3. ಸರ್ಕಾರದ ಆದೇಶ ಸಂಖ್ಯೆ:ಕಂಇ 299 ಬಿಎಸ್‌ಸಿ 2006.ದಿನಾಂಕ:3–2–2009 ಮತ್ತು 9–7–2009.
4. ಸರ್ಕಾರದ ಆದೇಶ ಸಂಖ್ಯೆ: ಕಂಇ 04 ಬಿಎಸ್‌ಸಿ 2011. ದಿನಾಂಕ: 25–02–2011.
5. ಸರ್ಕಾರದ ಆದೇಶ ಸಂಖ್ಯೆ: ಕಂಇ 33 ಡಿಎಸ್‌ಪಿ 2012. ದಿನಾಂಕ: 05–06–2012.
6. ಸರ್ಕಾರದ ಅ.ಸ. ಪತ್ರದ ಸಂಖ್ಯೆ: ಆರ್‌ಡಿ 33 ಡಿಎಸ್‌ಪಿ 2012. ದಿನಾಂಕ: 21–06–2012.
7. ಸರ್ಕಾರದ ಅ.ಸ.ಪ.ಸಂಖ್ಯೆ: 103 ಬಿಎಸ್‌ಸಿ 2016, ದಿನಾಂಕ: 22–07–2016.
8. ಈ ಕಛೇರಿಯ ಸಮಸಂಖ್ಯೆ ಅಧಿಸೂಚನೆ ದಿನಾಂಕ:12–09–2016 ಮತ್ತು ದಿನಾಂಕ:15–02–2017.
9. ನಿರ್ದೇಶಕರು, ಪದವಿಪೂರ್ವ ಶಿಕ್ಷಣ ಇಲಾಖೆ, ಬೆಂಗಳೂರುರವರ ಪತ್ರ ಸಂಖ್ಯೆ: ಪಪೂಶಿ/ದ್ವಿಪ್ರಶಾ/ಅಪಪ/2017–18, ದಿನಾಂಕ: 09–05–2017.

******************

ಹಾಸನ ಜಿಲ್ಲೆಯಲ್ಲಿ ಖಾಲಿ ಇರುವ 59 ಗ್ರಾಮಲೆಕ್ಕಿಗರ ಹುದ್ದೆಗಳನ್ನು ನೇರ ನೇಮಕಾತಿ ಮೂಲಕ ಭರ್ತಿ ಮಾಡುವ ಸಲುವಾಗಿ ಕರ್ನಾಟಕ ಸಾಮಾನ್ಯ ಸೇವೆಗಳು (ರೆವಿನ್ಯೂ ಸಬೋರ್ಡಿನೇಟ್ ಬ್ರಾಂಚ್) (ಕೇಡರ್ & ರಿಕ್ರೂಟ್‌ಮೆಂಟ್) ನಿಯಮಗಳು 2008 ಮತ್ತು ತಿದ್ದುಪಡಿ ನಿಯಮಗಳು 2009 ರನ್ವಯ ಹಾಗೂ ಉಲ್ಲೇಖದಲ್ಲಿನ ಸರ್ಕಾರಿ ಆದೇಶಗಳಲ್ಲಿ ನೀಡಿರುವ ಸೂಚನೆಗಳಂತೆ ಉಲ್ಲೇಖ (8) ರ ದಿನಾಂಕ: 12–09–2016 ರ ಅಧಿಸೂಚನೆಯಲ್ಲಿ ಅರ್ಜಿಗಳನ್ನು ಆಹ್ವಾನಿಸಿ ಅಧಿಸೂಚನೆಯನ್ನು ಹೊರಡಿಸಲಾಗಿರುತ್ತದೆ. Online ಮೂಲಕ ಅರ್ಜಿ ಸಲ್ಲಿಸಲು ಕಡೆಯ ದಿನಾಂಕವಾದ 18–10–2016 ರೊಳಗೆ ಸ್ವೀಕೃತವಾದ ಒಟ್ಟು ಅರ್ಜಿಗಳಲ್ಲಿ 1:10 ಅನುಪಾತದ ಪ್ರಮಾಣದಲ್ಲಿ ಪರಿಶೀಲನಾ ಪಟ್ಟಿಯನ್ನು ತಯಾರಿಸಿ ಪ್ರಕಟಿಸಲಾಗಿರುತ್ತದೆ.

ಸದರಿ ಪರಿಶೀಲನಾ ಪಟ್ಟಿಯಂತೆ ದಿನಾಂಕ: 07–12–2016 ಕ್ಕೆ ಪರಿಶೀಲನೆಗೆ ಹಾಜರಾದ ಅರ್ಹ ಅಭ್ಯರ್ಥಿಗಳ ಮೂಲ ದಾಖಲೆಗಳನ್ನು ಪರಿಶೀಲಿಸಿದೆ. ದಾಖಲೆಗಳ ಪರಿಶೀಲನೆಯಿಂದ ಅಭ್ಯರ್ಥಿಗಳ ಮೆರಿಟ್ ಮತ್ತು ಮೀಸಲಾತಿ ಆಧಾರದ ಮೇಲೆ ಉಲ್ಲೇಖ (8) ರ ದಿನಾಂಕ: 15–02–2017 ರ ಅಧಿಸೂಚನೆಯಲ್ಲಿ ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 128 ಸೆನೆನಿ 2006, ದಿನಾಂಕ: 01–08–2009 ಹಾಗೂ ಸರ್ಕಾರದ ಅಧಿಸೂಚನೆ ಸಂಖ್ಯೆ: ಡಿಪಿಎಆರ್ 54 ಎಸ್‌ಆರ್‌ಆರ್ 2012, ದಿನಾಂಕ: 23–06–2012 ಹಾಗೂ ಸರ್ಕಾರದ ಸುತ್ತೋಲೆ ಸಂಖ್ಯೆ: ಕಂಇ 100 ಬಿಎಸ್‌ಸಿ 2011, ದಿನಾಂಕ: 29–06–2012 ರ ರೀತ್ಯಾ ಅರ್ಹ ಅಭ್ಯರ್ಥಿಗಳು ಲಭ್ಯವಾಗದ ಕಾರಣ ಅಂಗವಿಕಲ ಅಭ್ಯರ್ಥಿಗಳ 02 ಹುದ್ದೆಗಳನ್ನು ಹೊರತುಪಡಿಸಿ 57 ಅಭ್ಯರ್ಥಿಗಳ ತಾತ್ಕಾಲಿಕ ಆಯ್ಕೆ ಪಟ್ಟಿಯನ್ನು ಪ್ರಕಟಿಸಲಾಗಿರುತ್ತದೆ.

ಸದರಿ ತಾತ್ಕಾಲಿಕ ಪಟ್ಟಿಗೆ, ಎರಡು ಆಕ್ಷೇಪಣೆಗಳು ನಿಗದಿತ ಅವಧಿಯೊಳಗೆ ಸ್ವೀಕೃತವಾಗಿದ್ದು ಆಕ್ಷೇಪಣೆಗಳನ್ನು ಪರಿಶೀಲಿಸಿದೆ. ಸದರಿ ಆಕ್ಷೇಪಣಾ ಅರ್ಜಿಗಳಲ್ಲಿ ಒಂದು ಅರ್ಜಿಯನ್ನು ಪರಿಗಣಿಸಲು ನಿಯಮಗಳಲ್ಲಿ ಅವಕಾಶವಿರುವುದಿಲ್ಲ. ಅದರಂತೆ ಅರ್ಜಿದಾರರಿಗೆ ಸೂಕ್ತ ಹಿಂಬರಹವನ್ನು ನೀಡಲಾಗಿರುತ್ತದೆ. ಹಾಗೂ ಮತ್ತೊಂದು ಅರ್ಜಿಯನ್ನು ನಿಯಮಾನುಸಾರ ಪರಿಶೀಲನೆ ನಡೆಸಿದ್ದು, ನೇಮಕಾತಿಗೆ ಅರ್ಹರೆಂದು ಕಂಡುಬಂದಿದ್ದರಿಂದ ಸದರಿ ಅಭ್ಯರ್ಥಿಯನ್ನು ನೇಮಕಾತಿಗೆ ಪರಿಗಣಿಸಲಾಗಿದೆ.

ತಂತ್ರಾಂಶದ ವ್ಯತ್ಯಾಸ ಹಾಗೂ ತಾಂತ್ರಿಕ ಕಾರಣಗಳಿಂದಾಗಿ ಅಂಗವಿಕಲ ಅಭ್ಯರ್ಥಿಗಳ 02 ಹುದ್ದೆಗಳಿಗೆ ಆಯ್ಕೆ ಕ್ರಮವನ್ನು ಕೈಬಿಟ್ಟು ತಾತ್ಕಾಲಿಕ ಆಯ್ಕೆ ಪಟ್ಟಿಯಲ್ಲಿನ 57 ಅಭ್ಯರ್ಥಿಗಳ ಪೈಕಿ 31 ಅಭ್ಯರ್ಥಿಗಳು ತಮ್ಮ ಮೂಲ ದಾಖಲಾತಿಗಳನ್ನು ನಿಗಧಿತ ದಿನಾಂಕದೊಳಗೆ ಕಛೇರಿಗೆ ಹಾಜರುಪಡಿಸಿರುತ್ತಾರೆ. ನಂತರ 02 ಅಭ್ಯರ್ಥಿಗಳು ಬೇರೆ ಜಿಲ್ಲೆಗಳಲ್ಲಿ ಆಯ್ಕೆ ಹೊಂದಿರುವುದಾಗಿ ತಮ್ಮ ಮೂಲ ದಾಖಲೆಗಳನ್ನು ಹಿಂಪಡೆದಿರುತ್ತಾರೆ. ಉಳಿದಂತೆ

21/06/17

ಮೂಲದಾಖಲೆಗಳನ್ನು ಹಾಜರುಪಡಿಸಿದ 29 ಅಭ್ಯರ್ಥಿಗಳ ದ್ವಿತೀಯ ಪಿ.ಯು.ಸಿ. ಅಂಕಪಟ್ಟಿಗಳನ್ನು ಪದವಿ ಪೂರ್ವ ಶಿಕ್ಷಣ ಇಲಾಖೆರವರಿಂದ ನೈಜತೆ ಬಗ್ಗೆ ಪರಿಶೀಲನೆ ನಡೆಸಲಾಗಿರುತ್ತದೆ.

ಅಭ್ಯರ್ಥಿಗಳ ಮೆರಿಟ್ ಮತ್ತು ಮೀಸಲಾತಿ ಆಧಾರದಲ್ಲಿ ಮತ್ತು ಪದವಿಪೂರ್ವ ಶಿಕ್ಷಣ ಇಲಾಖೆ, ಬೆಂಗಳೂರು ಇವರು ನೀಡಿರುವ ವರದಿಯಂತೆ 29 ಅಭ್ಯರ್ಥಿಗಳ ಅಂಕಪಟ್ಟಿಗಳು ನೈಜವಾಗಿದ್ದು, ಈ 29 ಅಭ್ಯರ್ಥಿಗಳನ್ನು ಹಾಗೂ ಆಕ್ಷೇಪಣೆ ವ್ಯಕ್ತಪಡಿಸಿದ್ದು ಅರ್ಹವೆಂದು ಪರಿಗಣಿಸಲಾದ ಈ ಕೆಳಕಂಡ ಪಟ್ಟಿ ಕ್ರಮಾಂಕ 14 ರ ಅಭ್ಯರ್ಥಿಯ ದ್ವಿತೀಯ ಪಿ.ಯು.ಸಿ. ಅಂಕಪಟ್ಟಿಯನ್ನು ಪರಿಶೀಲನೆಗೊಳಪಡಿಸುವ ಷರತ್ತಿಗೊಳಪಡಿಸಿ– ಒಟ್ಟು 30 ಅಭ್ಯರ್ಥಿಗಳ ಅಂತಿಮ ಆಯ್ಕೆ ಪಟ್ಟಿಯನ್ನು ಈ ಅಧಿಸೂಚನೆಯಲ್ಲಿ ಪ್ರಕಟಿಸಲಾಗಿರುತ್ತದೆ.

ಕೊರತೆ ಬೀಳುವ ಹುದ್ದೆಗಳಿಗೆ ಮೀಸಲಾತಿವಾರು ಕಾಯ್ದಿರಿಸಿದ ಪಟ್ಟಿಯಲ್ಲಿನ ಅಭ್ಯರ್ಥಿಗಳ ಮೂಲದಾಖಲೆಗಳನ್ನು ಪರಿಶೀಲನೆ ನಡೆಸಿದ ನಂತರ ನೇಮಕಾತಿ ಮಾಡಲು ಕ್ರಮವಹಿಸಲಾಗುವುದು.

ನೇಮಕಾತಿಯು ಈ ಕೆಳಗಿನ ಷರತ್ತುಗಳಿಗೆ ಒಳಪಟ್ಟಿರುತ್ತದೆ.

| | |
|---|---|
| 1. | ನೇಮಕಾತಿ ಸಮಯದಲ್ಲಿ ಅಭ್ಯರ್ಥಿಯು ನೇಮಕಾತಿಗೆ ಅನರ್ಹರೆಂದು ಕಂಡು ಬಂದಲ್ಲಿ, ನೇಮಕಾತಿಯನ್ನು ಯಾವುದೇ ಸೂಚನೆಯನ್ನು ನೀಡದೆ ರದ್ದುಪಡಿಸಲಾಗುವುದು. |
| 2. | ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಪ್ರವರ್ಗ–1, 2ಎ, 2ಬಿ, 3ಎ, 3ಬಿ, ಗ್ರಾಮೀಣ, ಯೋಜನಾ ನಿರಾಶ್ರಿತ, ಕನ್ನಡ ಮಾಧ್ಯಮ, ಮಾಜಿ ಸೈನಿಕ ಮತ್ತು ಅಂಗವಿಕಲ ಮೀಸಲಾತಿಯಡಿಯಲ್ಲಿ ಆಯ್ಕೆಯಾದ ಅಭ್ಯರ್ಥಿಗಳ ನೇಮಕಾತಿಯು ಸದರಿ ಪ್ರಮಾಣ ಪತ್ರಗಳ ಬಗ್ಗೆ ಸಕ್ಷಮ ಪ್ರಾಧಿಕಾರಗಳಿಂದ ಸಿಂಧುತ್ವ ಪರಿಶೀಲನೆಗೆ ಒಳಪಟ್ಟಿರುತ್ತದೆ. |
| 3. | ಅಭ್ಯರ್ಥಿಗಳ ವಿರುದ್ಧ ಯಾವುದೇ ಕ್ರಿಮಿನಲ್ ಮೊಕದ್ದಮೆ ಇರುವುದಿಲ್ಲವೆಂದು ಹಾಗೂ ಒಳ್ಳೆಯ ನಡತೆ ಮತ್ತು ಪೂರ್ವ ಚರಿತ್ರೆ ಹೊಂದಿರುವ ಬಗ್ಗೆ ಪೋಲೀಸು ಇಲಾಖೆಯಿಂದ ದೃಢೀಕರಣ ಪತ್ರವನ್ನು ಪಡೆಯುವ ಷರತ್ತಿಗೆ ಒಳಪಟ್ಟಿರುತ್ತದೆ. |
| 4. | ಅಭ್ಯರ್ಥಿಯು ಸಲ್ಲಿಸುವ ಮೂಲ ದಾಖಲಾತಿಗಳಲ್ಲಿ ತಪ್ಪು ಮಾಹಿತಿ ಇದ್ದಲ್ಲಿ ಅಥವಾ ಸದರಿ ದಾಖಲೆ ಸುಳ್ಳು ಎಂದು ಕಂಡು ಬಂದಲ್ಲಿ ಯಾವುದೇ ಸೂಚನೆ ನೀಡದೆ ಅಂತಹವರ ಆಯ್ಕೆಯನ್ನು ರದ್ದುಪಡಿಸಲಾಗುವುದು. |
| 5. | ಅಭ್ಯರ್ಥಿಯು ನೇಮಕಾತಿ ಆದೇಶ ತಲುಪಿದ 15 ದಿನಗಳೊಳಗೆ ತಮ್ಮ ಮೂಲ ದಾಖಲಾತಿಗಳೊಂದಿಗೆ ಖುದ್ದಾಗಿ ಸಂಬಂಧಿಸಿದ ತಹಸೀಲ್ದಾರರ ಸಮಕ್ಷಮದಲ್ಲಿ ವರದಿ ಮಾಡಿಕೊಳ್ಳುವುದು. ತಪ್ಪಿದಲ್ಲಿ ಕರ್ನಾಟಕ ನಾಗರೀಕ ಸೇವೆ (ಸಾಮಾನ್ಯ ನೇಮಕಾತಿ) ನಿಯಮಗಳು 1977ರ ನಿಯಮ 18 ರನ್ವಯ ನೇಮಕಾತಿಯನ್ನು ರದ್ದುಪಡಿಸಲಾಗುವುದು. |
| 6. | ಶೇಕಡವಾರು ಅಂಕಗಳು ಒಂದೇ ಇದ್ದಂತಹ ಅಭ್ಯರ್ಥಿಗಳ ಪೈಕಿ ನಿಯಮಾನುಸಾರ ವಯಸ್ಸಿನಲ್ಲಿ ಹಿರಿಯರಾದ ಅಭ್ಯರ್ಥಿಯನ್ನು ಆಯ್ಕೆ ಮಾಡಿದೆ. |

ಆಯ್ಕೆ ಪಟ್ಟಿಯನ್ನು http://hassan.nic.in ವೆಬ್‌ಸೈಟ್‌ನಲ್ಲಿ ನೋಡಬಹುದು.

Chaitra V. 21/06/17

(ಚೈತ್ರ.ವಿ)
ಅಧ್ಯಕ್ಷರು,
ಗ್ರಾಮಲೆಕ್ಕಿಗರ ನೇರ ನೇಮಕಾತಿ ಸಮಿತಿ ಹಾಗೂ
ಜಿಲ್ಲಾಧಿಕಾರಿಗಳು, ಹಾಸನ ಜಿಲ್ಲೆ, ಹಾಸನ.

ಸಂಕಲನಕಾರರು, ಸರ್ಕಾರಿ ಹೊರವಲಯ ಮುದ್ರಣಾಲಯ, ಆರ್.ವಿ.ಕಾಲೇಜ್ ಅಂಚೆ, 8ನೇ ಮೈನ್, ಮೈಸೂರು ರಸ್ತೆ, ಕೆಂಗೇರಿ, ಬೆಂಗಳೂರು–560059, ಇವರಿಗೆ ಕಳುಹಿಸುತ್ತಾ, ಈ ಅಧಿಸೂಚನೆಯನ್ನು ವಿಶೇಷ ರಾಜ್ಯಪತ್ರದಲ್ಲಿ ಪ್ರಕಟಿಸಲು ಹಾಗೂ ಪ್ರತಿಯನ್ನು ಈ ಕಚೇರಿಗೆ ಒದಗಿಸಲು ಕೋರಿದೆ.

ಪ್ರತಿಯನ್ನು:–

1. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ, ಬೆಂಗಳೂರು ಇವರಿಗೆ ಸಲ್ಲಿಸಿದೆ.
2. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಕಂದಾಯ ಇಲಾಖೆ, ಸೇವೆಗಳು, ಬಹುಮಹಡಿಗಳ ಕಟ್ಟಡ, ಬೆಂಗಳೂರು ಇವರಿಗೆ ಸಲ್ಲಿಸಿದೆ.
3. ಪ್ರಾದೇಶಿಕ ಆಯುಕ್ತರು, ಮೈಸೂರು ಇವರಿಗೆ ಸಲ್ಲಿಸಿದೆ.
4. ರಾಜ್ಯದ ಎಲ್ಲಾ ಜಿಲ್ಲಾಧಿಕಾರಿಗಳಿಗೆ ಕಳುಹಿಸುತ್ತಾ ತಮ್ಮ ಕಾರ್ಯಾಲಯದ ಸೂಚನಾ ಫಲಕದಲ್ಲಿ ಪ್ರಕಟಿಸಲು ಕೋರಿದೆ.
5. ಜಿಲ್ಲಾ ಸಮಾಜ ಕಲ್ಯಾಣಾಧಿಕಾರಿಗಳು, ಹಾಸನ ಜಿಲ್ಲೆ, ಹಾಸನ.
6. ಜಿಲ್ಲೆಯ ಎಲ್ಲಾ ಉಪವಿಭಾಗಾಧಿಕಾರಿಗಳಿಗೆ ಕಳುಹಿಸಿ ತಮ್ಮ ಕಾರ್ಯಾಲಯದ ಸೂಚನಾ ಫಲಕದಲ್ಲಿ ಪ್ರಕಟಿಸಲು ಕೋರಿದೆ.
7. ಜಿಲ್ಲೆಯ ಎಲ್ಲಾ ತಹಶೀಲ್ದಾರರುಗಳಿಗೆ ಕಳುಹಿಸಿ ತಮ್ಮ ಕಾರ್ಯಾಲಯದ ಸೂಚನಾ ಫಲಕದಲ್ಲಿ ಪ್ರಕಟಿಸಲು ಕೋರಿದೆ.
8. ಈ ಕಾರ್ಯಾಲಯದ ಸೂಚನಾ ಫಲಕಕ್ಕೆ